# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 247

ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 06-07-2023

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲಾಗುವುದು; | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ, ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ದಿನಾಂಕ 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಲಾಗಿರುತ್ತದೆ. ಆರಂಭದಲ್ಲಿ ವೇತನ ಆಯೋಗಕ್ಕೆ 06 ತಿಂಗಳ ಕಾಲಮಿತಿಯನ್ನು ನಿಗದಿಪಡಿಸಲಾಗಿತ್ತು. ಆದರೆ, ಸರ್ಕಾರದ ವಿವಿಧ ಇಲಾಖೆಗಳು ಮತ್ತು ಸ್ವಾಯತ್ತ ಸಂಸ್ಥೆಗಳೊಂದಿಗೆ ಸಮಾಲೋಚಿಸಲು ನಿಗದಿಪಡಿಸಿರುವ ಕಾಲಾವಧಿಯನ್ನು ವಿಸ್ತರಿಸುವಂತೆ ಸಲ್ಲಿಸಲಾದ ಆಯೋಗದ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ಆಯೋಗದ ಕಾಲಾವಧಿಯನ್ನು ದಿನಾಂಕ: 19.05.2023ರಿಂದ 06 ತಿಂಗಳು ವಿಸ್ತರಿಸಿರುತ್ತದೆ. |
| ಆ) | 7ನೇ ವೇತನ ಆಯೋಗಕ್ಕೆ ನೀಡಿರುವ ಕಾಲಮಿತಿ ಹಾಗೂ ರಾಜ್ಯ ಸರ್ಕಾರಿ ನೌಕರರಿಗೆ ಮಧ್ಯಂತರ ಪರಿಹಾರವಾಗಿ ನೀಡಲಾಗಿರುವ ವೇತನದ ಮಾಹಿತಿ ಒದಗಿಸುವುದು; | |
| ಇ) | ಈಗಾಗಲೇ 7ನೇ ವೇತನ ಆಯೋಗಕ್ಕೆ ನೀಡಿದ ಸಮಯವು ಹೆಚ್ಚಿನದಾಗಿದ್ದು, ಪುನ: ಕಾಲಾವಧಿಯನ್ನು ವಿಸ್ತಿರಿಸಿರುವುದಕ್ಕೆ ಕಾರಣಗಳೇನು? | |

| | | |
|---|---|---|
| | | ಸರ್ಕಾರದ ನೀತಿ ನಿರ್ಣಯದಂತೆ, ದಿನಾಂಕ:01-03-2023ರ ಸರ್ಕಾರಿ ಆದೇಶ ಸಂಖ್ಯೆ: ಆಇ 7 ಎಸ್.ಆರ್.ಪಿ 2023 ರಲ್ಲಿ, ರಾಜ್ಯ ಸರ್ಕಾರಿ ನೌಕರರಿಗೆ ಮತ್ತು ನಿವೃತ್ತ ನೌಕರರಿಗೆ ಮೂಲ ವೇತನ/ಮೂಲ ಪಿಂಚಣಿಯ ಶೇ 17ರಷ್ಟು ಮಧ್ಯಂತರ ಪರಿಹಾರವನ್ನು ದಿನಾಂಕ: 01-04-2023ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ. |

ಸಂ: ಆಇ 13 ಎಸ್‌ಆರ್‌ಪಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ